ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳ ನೇಮಕಾತಿ ಕುರಿತು

ಶ್ರೀ ನಸೀರ್ ಅಹ್ಮದ್(ವಿಧಾನಸಭೆಯಿಂದ ಚುನಾಯಿತರಾದವರು) -

62 (126) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರ ಹುದ್ದೆಗೆ ನೇಮಕ ಮಾಡಲು ಸರ್ಕಾರದಿಂದ ಅಧಿಸೂಚನೆ ಹೊರಡಿಸಲಾಗಿದೆಯೇ; ಹೊರಡಿಸಿದ್ದಲ್ಲಿ, ಅಧಿಸೂಚನೆಯ ಪ್ರತಿಯನ್ನು ನೀಡುವುದು;

(ಆ) ಪ್ರಸ್ತುತ ನೇಮಕಾತಿ ಪ್ರಕ್ರಿಯೆಯು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಇ) ಈಗಾಗಲೇ ಎಷ್ಟು ಜನರಿಗೆ ನೇಮಕಾತಿ ಆದೇಶ ನೀಡಲಾಗಿದೆ ಹಾಗೂ ಬಾಕಿ ಉಳಿದಿರುವ ಸಂಖ್ಯೆ ಎಷ್ಟು;

(ಈ) ಉಳಿದವರಿಗೆ ನೇಮಕಾತಿ ನೀಡಲು ಉಂಟಾಗಿರುವ ಸಮಸ್ಯೆಗಳೇನು;

(ಉ) ನೇಮಕಾತಿ ಮಾಡಲು ಸಮಿತಿ ರಚಿಸಲಾಗಿತ್ತೆ; ಸಮಿತಿಯು ವರದಿಯನ್ನು ನೀಡಲಾಗಿದೆಯೇ; (ನೀಡಿದ್ದಲ್ಲಿ ಅದರ ಪ್ರತಿ ನೀಡುವುದು)